# Bangalore
# Regional News
# 25.06.2026 / 18.40 hrs
## ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ

ಮುಖ್ಯಾಂಶಗಳು

1. ತುಂಗಭದ್ರಾ ನದಿ ಪಾತ್ರದ ರೈತರ ಹಿತರಕ್ಷಣೆಗೆ ಕರ್ನಾಟಕ, ಆಂಧ್ರಪ್ರದೇಶ, ತೆಲಂಗಾಣದಿಂದ ಒಮ್ಮತದ ತೀರ್ಮಾನ – ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್
2. ದೇಶದ ಅಣೆಕಟ್ಟುಗಳ ಹೂಳು ತೆಗೆಯಲು ಶೀಘ್ರದಲ್ಲೇ ಯೋಜನೆ ಜಾರಿಗೆ – ಕೇಂದ್ರ ಜಲಶಕ್ತಿ ಸಚಿವ ಸಿ.ಆರ್. ಪಾಟೀಲ್ ಘೋಷಣೆ
3. ರಾಜ್ಯದಲ್ಲಿ ಬರಪರಿಸ್ಥಿತಿ ಎದುರಿಸಲು ಸನ್ನದ್ಧರಾಗಿರುವಂತೆ ಅಧಿಕಾರಿಗಳಿಗೆ ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ಸೂಚನೆ
4. ರಾಜ್ಯದ ಮಾವು ಬೆಳೆಗಾರರಿಗೆ ಆರ್ಥಿಕ ಪರಿಹಾರ ಘೋಷಿಸಿದ ಕೇಂದ್ರ ಸರ್ಕಾರ
5. ಬಿಡದಿ ಟೌನ್‌ಶಿಪ್ ವಿವಾದ; ಮುಖ್ಯಮಂತ್ರಿಗೆ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಮತ್ತೊಂದು ಪತ್ರ – ಇದೇ 27ರಂದು ಚರ್ಚೆಗೆ ಆಹ್ವಾನ

---

ತುಂಗಭದ್ರಾ ನದಿ ಪಾತ್ರದ ರೈತರ ಹಿತರಕ್ಷಣೆಗೆ ಕರ್ನಾಟಕ, ಆಂಧ್ರಪ್ರದೇಶ ಹಾಗೂ ತೆಲಂಗಾಣ ರಾಜ್ಯಗಳು ಸೇರಿ ಒಮ್ಮತದ ಐತಿಹಾಸಿಕ ತೀರ್ಮಾನ ಕೈಗೊಂಡಿದೆ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ.
ಕೊಪ್ಪಳ ಜಿಲ್ಲೆ ಮುನಿರಾಬಾದ್‌ನ ಸರ್ಕಾರಿ ಹೈಸ್ಕೂಲ್ ಮೈದಾನದಲ್ಲಿ ತುಂಗಭದ್ರಾ ಅಣೆಕಟ್ಟೆಯ 33 ಕ್ರಸ್ಟ್‌ಗೇಟ್‌ಗಳ ಉದ್ಘಾಟನಾ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ನವಲಿ ಸಮಾನಾಂತರ ಜಲಾಶಯ, ಹೂಳೆತ್ತುವ ವಿಚಾರ ಸೇರಿದಂತೆ ಅನೇಕ ವಿಷಯಗಳ ಬಗ್ಗೆ ಸುದೀರ್ಘ ಚರ್ಚೆ ನಡೆಸಲಾಗಿದೆ. ಎಲ್ಲರೂ ಸೇರಿ ಒಮ್ಮತದ ನಿರ್ಧಾರಕ್ಕೆ ಬಂದಿದ್ದು, ಈ ತೀರ್ಮಾನವನ್ನು ಕೇಂದ್ರ ಸಚಿವರೇ ಪ್ರಕಟಿಸಲಿದ್ದಾರೆ ಎಂದು ಹೇಳಿದ್ದಾರೆ.
ನಮ್ಮ ನೀರು, ನಮ್ಮ ಹಕ್ಕು ಆಶಯದಡಿ ಮೂರು ರಾಜ್ಯಗಳ ರೈತರ ರಕ್ಷಣೆಗೆ ಐತಿಹಾಸಿಕ ತೀರ್ಮಾನ ಕೈಗೊಳ್ಳಲಾಗಿದ್ದು, ಒಕ್ಕೂಟದ ವ್ಯವಸ್ಥೆಯಲ್ಲಿ ಇದು ಇತಿಹಾಸದ ಪುಟ ಸೇರಲಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.
*****ಧ್ವನಿ*** ಡಿ.ಕೆ. ಶಿವಕುಮಾರ್
ಇದೇ ವೇಳೆ ಮಾತನಾಡಿದ ಕೇಂದ್ರ ಜಲಶಕ್ತಿ ಸಚಿವ ಸಿ.ಆರ್. ಪಾಟೀಲ್, ದೇಶಾದ್ಯಂತ ಇರುವ ಬಹುತೇಕ ಅಣೆಕಟ್ಟುಗಳಲ್ಲಿ ಶೇಕಡ 15ಕ್ಕಿಂತಲೂ ಹೆಚ್ಚು ಹೂಳು ತುಂಬಿಕೊಂಡಿದ್ದು, ಜಲಾಶಯಗಳ ನೀರು ಸಂಗ್ರಹಣಾ ಸಾಮರ್ಥ್ಯ ಗಣನೀಯವಾಗಿ ಕುಸಿದಿದೆ. ಈ ಹಿನ್ನೆಲೆಯಲ್ಲಿ ಅಣೆಕಟ್ಟುಗಳ ಹೂಳು ತೆಗೆಯಲು ಶೀಘ್ರದಲ್ಲೇ ಯೋಜನೆ ಜಾರಿಗೆ ತರಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.
ಈ ನೂತನ ಗೇಟ್‌ಗಳಿಂದ ಮೂರು ರಾಜ್ಯಗಳ ತಲೆಮಾರುಗಳ ಸಮಸ್ಯೆಗೆ ಮುಕ್ತಿ ದೊರೆತಿದೆ ಎಂದು ತೆಲಂಗಾಣ ಮುಖ್ಯಮಂತ್ರಿ ಎಂ. ರೇವಂತ ರೆಡ್ಡಿ ತಿಳಿಸಿದ್ದಾರೆ. ಲಕ್ಷಾಂತರ ರೈತರ ಕಣ್ಣೀರು ಒರೆಸುವ ನಿಟ್ಟಿನಲ್ಲಿ ಇದು ಪರಿಹಾರವಾಗಲಿದೆ ಎಂದು ಹೇಳಿದ್ದಾರೆ.
ಆಂಧ್ರಪ್ರದೇಶ ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು ಮಾತನಾಡಿ, ಗೋದಾವರಿ, ಕಾವೇರಿ ನದಿಗಳ ಜೋಡಣೆಗೆ ಆಗ್ರಹಿಸಿದ್ದಾರೆ.

---

ರಾಜ್ಯದಲ್ಲಿ ಸಂಭವನೀಯ ಪ್ರಕೃತಿ ವಿಕೋಪಗಳು ಹಾಗೂ ಸೂಪರ್ ಎಲ್ ನೀನೋ ಪರಿಣಾಮದಿಂದ ಉಂಟಾಗಬಹುದಾದ ಬರ ಪರಿಸ್ಥಿತಿಯನ್ನು ಪರಿಣಾಮಕಾರಿಯಾಗಿ ಎದುರಿಸಲು ವಿವಿಧ ಇಲಾಖೆಗಳ ಸಮನ್ವಯದೊಂದಿಗೆ ಕಾರ್ಯನಿರ್ವಹಿಸುವಂತೆ ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ವಿಧಾನಸೌಧದಲ್ಲಿಂದು ಪ್ರಕೃತಿ ವಿಕೋಪ ನಿರ್ವಹಣೆ ಕುರಿತು ಹಿರಿಯ ಅಧಿಕಾರಿಗಳೊಂದಿಗೆ ಸಭೆ ನಡೆಸಿ, ಈವರೆಗೆ ಕೈಗೊಂಡಿರುವ ಅಗತ್ಯ ಕ್ರಮಗಳ ಕುರಿತು ಮಾಹಿತಿ ಪಡೆದಿದ್ದಾರೆ.
ಸಂಭವನೀಯ ಬರ ಪರಿಸ್ಥಿತಿಯನ್ನು ಗಮನದಲ್ಲಿಟ್ಟುಕೊಂಡು ಕುಡಿಯುವ ನೀರಿನ ಲಭ್ಯತೆ, ಜಾನುವಾರುಗಳಿಗೆ ಮೇವು, ಕೃಷಿ ಚಟುವಟಿಕೆಗಳ ನಿರ್ವಹಣೆ ಹಾಗೂ ನೀರಿನ ಸಂರಕ್ಷಣೆಗೆ ಸಂಬಂಧಿಸಿದಂತೆ ಜಿಲ್ಲಾವಾರು ಕಾರ್ಯಯೋಜನೆಗಳನ್ನು ಸಿದ್ಧಪಡಿಸುವಂತೆ ನಿರ್ದೇಶನ ನೀಡಿದ್ದಾರೆ.
ಕುಡಿಯುವ ನೀರಿಗಾಗಿ ಕೊಳವೆ ಬಾವಿ ಕೊರೆಸಲು ತ್ವರಿತಗತಿಯಲ್ಲಿ ಅನುಮತಿ ನೀಡಬೇಕು. ಈ ವಿಚಾರದಲ್ಲಿ ಯಾವುದೇ ರೀತಿಯ ವಿಳಂಬವಾಗಬಾರದು. ಅಗತ್ಯವಾಗಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಸಮನ್ವಯದೊಂದಿಗೆ ಕಾರ್ಯನಿರ್ವಹಿಸಬೇಕು ಎಂದು ಸೂಚನೆ ನೀಡಿದ್ದಾರೆ.
ರಾಜ್ಯದ 122 ತಾಲ್ಲೂಕುಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಇದ್ದು, 139 ಹಳ್ಳಿಗಳಿಗೆ ಟ್ಯಾಂಕರ್ ಮೂಲಕ ನೀರು ಸರಬರಾಜು ಮಾಡಲಾಗುತ್ತಿದೆ. 789 ಖಾಸಗಿ ಬೋರ್‌ವೆಲ್‌ಗಳನ್ನು ಬಾಡಿಗೆ ಪಡೆಯಲಾಗಿದ್ದು, 669 ಹಳ್ಳಿಗಳಲ್ಲಿ ಖಾಸಗಿ ಕೊಳವೆಬಾವಿಗಳಿಂದ ನೀರು ಸರಬರಾಜು ಮಾಡಲಾಗುತ್ತಿದೆ ಎಂದು ಸಭೆಯಲ್ಲಿ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

---

ರಾಜ್ಯದ ಮಾವು ಬೆಳೆಗಾರರಿಗೆ ಕೇಂದ್ರ ಸರ್ಕಾರ ಆರ್ಥಿಕ ಪರಿಹಾರ ಘೋಷಿಸಿದೆ. ಮಾರುಕಟ್ಟೆ ಮಧ್ಯಸ್ಥಿಕೆ ಯೋಜನೆಯಡಿಯಲ್ಲಿ ತೋತಾಪುರಿ ಮಾವಿಗೆ ಕ್ವಿಂಟಾಲ್‌ಗೆ ಒಂದು ಸಾವಿರದ 750 ರೂಪಾಯಿಗಳ ಆರ್ಥಿಕ ಸಹಾಯ ನೀಡಲು ಅನುಮೋದನೆ ನೀಡಿದೆ.
ಈ ಘೋಷಣೆಯನ್ನು ಕೇಂದ್ರ ಗ್ರಾಹಕ ವ್ಯವಹಾರಗಳು, ಆಹಾರ ಮತ್ತು ಸಾರ್ವಜನಿಕ ವಿತರಣಾ ಸಚಿವ ಪ್ರಲ್ಹಾದ್ ಜೋಶಿ ಇಂದು ಬಿಡುಗಡೆ ಮಾಡಿದ್ದಾರೆ. ರಾಜ್ಯ ಸರ್ಕಾರದ ಪ್ರಸ್ತಾವನೆ ಪುರಸ್ಕರಿಸಿರುವ ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಇಲಾಖೆಯು ರಾಜ್ಯದಲ್ಲಿ 1.30 ಲಕ್ಷ ಮೆಟ್ರಿಕ್ ಟನ್ ತೋತಾಪುರಿ ತಳಿಯ ಮಾವನ್ನು ಖರೀದಿಸಲು ಅನುಮತಿ ನೀಡಿದೆ.
ಈ ಕುರಿತಂತೆ ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಪ್ರಲ್ಹಾದ್ ಜೋಶಿ, ಆರ್ಥಿಕ ಸಂಕಷ್ಟವನ್ನು ಎದುರಿಸುತ್ತಿರುವ ಮಾವು ಬೆಳೆಗಾರರಿಗೆ ಬೆಂಬಲ ನೀಡಿದ್ದಕ್ಕಾಗಿ ಬೆಳೆಗಾರರ ಪರವಾಗಿ ಪ್ರಧಾನಿ ಹಾಗೂ ಕೇಂದ್ರ ಕೃಷಿ ಸಚಿವರಿಗೆ ಧನ್ಯವಾದ ಸಲ್ಲಿಸಿದ್ದಾರೆ.

---

ಬಿಡದಿ ಟೌನ್‌ಶಿಪ್ ವಿವಾದ ಕುರಿತಂತೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಕೇಂದ್ರ ಕೈಗಾರಿಕಾ ಸಚಿವ ಎಚ್.ಡಿ. ಕುಮಾರಸ್ವಾಮಿ ಮತ್ತೊಂದು ಪತ್ರ ಬರೆದಿದ್ದಾರೆ.
ಇದೇ 27ರಂದು ಬೈರಮಂಗಲ ಗ್ರಾಮಕ್ಕೆ ಭೇಟಿ ನೀಡಲಿದ್ದು, ಅಂದು ಬಿಡದಿ ಟೌನ್‌ಶಿಪ್ ಯೋಜನೆಯಿಂದ ಬಾಧಿತರಾಗುವ ರೈತರು, ಕೃಷಿ ಕಾರ್ಮಿಕರು ಹಾಗೂ ಹೈನುಗಾರಿಕೆಯಲ್ಲಿ ತೊಡಗಿರುವ ಮಹಿಳೆಯರ ಅಹವಾಲು ಆಲಿಸಲು ನಿರ್ಧರಿಸಲಾಗಿದೆ.
ಈ ಹಿನ್ನೆಲೆಯಲ್ಲಿ ತಾವು, ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಬೈರಮಂಗಲಕ್ಕೆ ಭೇಟಿ ನೀಡುವಂತೆ ಮನವಿ ಮಾಡಿದ್ದಾರೆ. ಈ ಸಂದರ್ಭದಲ್ಲಿ ನಾವಿಬ್ಬರು ಬಾಧಿತ ವರ್ಗದ ಜನರ ಸಂಕಷ್ಟಗಳನ್ನು ಆಲಿಸಿ, ಸ್ಥಳದಲ್ಲಿಯೇ ಪರ್ಯಾಯ ಮಾರ್ಗಗಳನ್ನು ಹುಡುಕಲು ಸಾಧ್ಯ ಎಂದು ಭಾವಿಸಲಾಗಿದೆ ಎಂದು ಪತ್ರದಲ್ಲಿ ಉಲ್ಲೇಖಿಸಿದ್ದಾರೆ.

---

ದೇಶ ಮತ್ತು ರಾಜ್ಯದ ಆರ್ಥಿಕ ಪ್ರಗತಿಯಲ್ಲಿ ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳು ಪ್ರಮುಖ ಪಾತ್ರವಹಿಸುತ್ತಿದ್ದು, ಅವುಗಳ ಸಮಸ್ಯೆ ಬಗೆಹರಿಸಲು ಸರ್ಕಾರ ಬದ್ಧವಾಗಿದೆ ಎಂದು ನಗರಾಭಿವೃದ್ಧಿ ಸಚಿವ ಯತೀಂದ್ರ ಸಿದ್ದರಾಮಯ್ಯ ಭರವಸೆ ನೀಡಿದ್ದಾರೆ.
ಬೆಂಗಳೂರಿನಲ್ಲಿ ಕರ್ನಾಟಕ ವಾಣಿಜ್ಯ ಮತ್ತು ಕೈಗಾರಿಕಾ ಮಹಾಸಂಸ್ಥೆ ಹಮ್ಮಿಕೊಂಡಿದ್ದ ಇ-ಖಾತಾ ಮತ್ತು ನಗರ ಅಭಿವೃದ್ಧಿ ಸಂವಾದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಅತಿಹೆಚ್ಚು ಉದ್ಯೋಗಾವಕಾಶಗಳನ್ನು ಸೃಷ್ಟಿಸುತ್ತಿರುವುದು ಎಂಎಸ್‌ಎಂಇ ವಲಯವಾಗಿದ್ದು, ಯಾವುದೇ ಸರ್ಕಾರ ಇದನ್ನು ನಿರ್ಲಕ್ಷಿಸಲು ಸಾಧ್ಯವಿಲ್ಲ ಎಂದು ಅಭಿಪ್ರಾಯಪಟ್ಟಿದ್ದಾರೆ.

---

ಭಾರತದ ಸ್ಥಳೀಯ ರಕ್ಷಣಾ ಸಾಮರ್ಥ್ಯಗಳಿಗೆ ಉತ್ತೇಜನ ನೀಡುವ ಸಲುವಾಗಿ ರಕ್ಷಣಾ ಸಂಶೋಧನೆ ಮತ್ತು ಅಭಿವೃದ್ಧಿ ಸಂಸ್ಥೆ, ಬೆಂಗಳೂರಿನ ಸೆಂಟರ್ ಫಾರ್ ಏರ್ ಬೋರ್ನ್ ಸಿಸ್ಟಮ್ಸ್ – ಕ್ಯಾಬ್ಸ್‌ನಲ್ಲಿ ನಡೆದ ಸಮಾರಂಭದಲ್ಲಿ ನೇತ್ರ ಯುದ್ಧ ವಿಮಾನದ ನಿಯಂತ್ರಣ ವ್ಯವಸ್ಥೆಯ ಅಂತಿಮ ಕಾರ್ಯಾಚರಣೆಗೆ ಅನುಮತಿ ನೀಡಿದೆ.
ರಕ್ಷಣಾ ಸಿಬ್ಬಂದಿ ಉಪ ಮುಖ್ಯಸ್ಥ ಏರ್ ಮಾರ್ಷಲ್ ಅವದೇಶ್ ಕುಮಾರ್ ಭಾರ್ತಿ, ಅಂತಿಮ ಕಾರ್ಯಾಚರಣೆಗೆ ಔಪಚಾರಿಕವಾಗಿ ಅನುಮತಿ ನೀಡಿರುವುದಾಗಿ ಘೋಷಿಸಿದ್ದಾರೆ.
ಭಾರತೀಯ ವಾಯುಪಡೆಯ "ಆಕಾಶದಲ್ಲಿ ಕಣ್ಣು' ಎಂದು ಕರೆಯಲ್ಪಡುವ ಈ ನೇತ್ರ ಯುದ್ಧ ವಿಮಾನವು ಎಲ್ಲಾ ಅಭಿವೃದ್ಧಿ ಮತ್ತು ಕಾರ್ಯಾಚರಣೆಯ ಪ್ರಯೋಗಗಳನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದೆ.
ಬಳಿಕ ಮಾತನಾಡಿದ ಅವರು, ಭವಿಷ್ಯದ ಮಿಲಿಟರಿ ಕಾರ್ಯಾಚರಣೆಗಳು ಮಾನವಸಹಿತ ಮತ್ತು ಮಾನವರಹಿತ ವ್ಯವಸ್ಥೆಗಳು ಹಾಗೂ ಕೃತಕಬುದ್ಧಿಮತ್ತೆಯ ಸಂಯೋಜನೆಯನ್ನು ಒಳಗೊಂಡಿರುತ್ತದೆ ಎಂದು ತಿಳಿಸಿದ್ದಾರೆ.
****ಧ್ವನಿ**** ಅವದೇಶ್ ಕುಮಾರ್ ಭಾರ್ತಿ

---

ದಾವಣಗೆರೆಯ ಹರಿಹರದಲ್ಲಿ ಬಂಧಿಸಲ್ಪಟ್ಟಿದ್ದ ಶಂಕಿತ ಭಯೋತ್ಪಾದಕ ಉತ್ತರ ಪ್ರದೇಶ ಮೂಲದ ಸುಹೇಲ್‌ನನ್ನು ದಾವಣಗೆರೆ ನ್ಯಾಯಾಲಯ 10 ದಿನಗಳ ಕಾಲ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದೆ.
ಪೊಲೀಸರ ಪ್ರಾಥಮಿಕ ತನಿಖೆಯ ಪ್ರಕಾರ ಈತ ನೇರವಾಗಿ ಪಾಕಿಸ್ತಾನದಲ್ಲಿರುವ ಕೆಲವು ಹ್ಯಾಂಡ್ಲರ್‌ಗಳು ಹಾಗೂ ಶಂಕಾಸ್ಪದ ವ್ಯಕ್ತಿಗಳೊಂದಿಗೆ ಸಾಮಾಜಿಕ ಜಾಲತಾಣ ಹಾಗೂ ಇಂಟರ್ನೆಟ್ ಕರೆಗಳ ಮೂಲಕ ಸಂಪರ್ಕದಲ್ಲಿರುವುದು ದೃಢಪಟ್ಟಿದೆ.

________ ಮುಕ್ತಾಯ ________